# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1224
ಸದಸ್ಯರ ಹೆಸರು : ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು)
ಉತ್ತರಿಸುವ ದಿನಾಂಕ : 19.12.2024
ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಪ್ರಮುಖ ಆಣೆಕಟ್ಟೆನಲ್ಲಿ ಒಂದಾದ ತುಂಗಭದ್ರಾ ಜಲಾಶಯವು ಹೂಳಿನಿಂದ ತುಂಬಿ ಜಲಾಶಯದ ಸಾಮರ್ಥ್ಯ ಕುಗ್ಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಪೂರ್ಣ ಮಾಹಿತಿ ನೀಡುವುದು) | ಕೊಪ್ಪಳ ಜಿಲ್ಲೆಯ ನವಲಿ ಗ್ರಾಮದ ಹತ್ತಿರ ಸಮತೋಲನಾ ಜಲಾಶಯ ನಿರ್ಮಿಸುವ ಯೋಜನೆಯ ರೂ.15,601.00 ಕೋಟಿ ಮೊತ್ತದ (ಚಾಲ್ತಿಯಲ್ಲಿರುವ 2021-22ನೇ ಸಾಲಿನ ಏಕರೂಪ ದರಪಟ್ಟಿಯನ್ವಯ) ವಿವರವಾದ ವರದಿಯನ್ನು ತಯಾರಿಸಲಾಗಿದೆ.<br>ಸದರಿ ಯೋಜನೆಯಡಿ ಕೊಪ್ಪಳ ಜಿಲ್ಲೆಯ ನವಲಿ ಗ್ರಾಮದ ಹತ್ತಿರ 30 ಟಿಎಂಸಿ ಸಂಗ್ರಹಣಾ ಸಾಮರ್ಥ್ಯದ ಸಮಾನಾಂತರ ಜಲಾಶಯ ನಿರ್ಮಿಸಿ, ಕೊಪ್ಪಳ ತಾಲ್ಲೂಕಿನ ಹಿರೇಬಗನಾಳ ಗ್ರಾಮದಿಂದ ಸುಮಾರು 38 ಕಿ.ಮೀ. ಕಾಲುವೆ ಮುಖಾಂತರ (3.00 ಕಿ.ಮೀ. ಟನಲ್ ಒಳಗೊಂಡಂತೆ) ಸಮತೋಲನಾ ಜಲಾಶಯಕ್ಕೆ ನೀರನ್ನು ಹರಿಸಲು ಹಾಗೂ ಜಲಾಶಯದಿಂದ ಫೀಡರ್ ಕಾಲುವೆ ಮುಖಾಂತರ ತುಂಗಭದ್ರಾ ಎಡದಂಡೆ ಕಾಲುವೆಯ 42ನೇ ಮೈಲಿನಲ್ಲಿ ಜೋಡಿಸಿ ಕಾಲುವೆಗೆ ನೀರು ಹರಿಸಲು ಉದ್ದೇಶಿಸಲಾಗಿರುತ್ತದೆ.<br>ತುಂಗಭದ್ರಾ ಯೋಜನೆಯು ಅಂತರ ರಾಜ್ಯ ಯೋಜನೆಯಾಗಿರುವುದರಿಂದ, ಆಂಧ್ರಪ್ರದೇಶ ಮತ್ತು ತೆಲಂಗಾಣ ರಾಜ್ಯಗಳ ಹಾಗೂ ತುಂಗಭದ್ರಾ ಮಂಡಳಿಯ ಸಹಮತದೊಂದಿಗೆ ಕೊಪ್ಪಳ ಜಿಲ್ಲೆಯ ನವಲಿ ಗ್ರಾಮದ ಹತ್ತಿರ ಸಮತೋಲನಾ ಜಲಾಶಯ ನಿರ್ಮಿಸುವ ಯೋಜನೆಯನ್ನು ಅನುಷ್ಠಾನಗೊಳಿಸಬೇಕಾಗಿರುತ್ತದೆ.<br>ಆಂಧ್ರ ಪ್ರದೇಶ ಮತ್ತು ತೆಲಂಗಾಣ ರಾಜ್ಯಗಳೊಂದಿಗೆ ಸದರಿ ಯೋಜನೆಯ ಕುರಿತು ಚರ್ಚಿಸಲು ಉನ್ನತ ಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸುವ ಸಲುವಾಗಿ ದಿನಾಂಕ:22.06.2023, 10.01.2024, 05.07.2024 & 21.11.2024 ರಂದು ಸದರಿ ರಾಜ್ಯಗಳಿಗೆ ಪತ್ರ ಬರೆಯಲಾಗಿದ್ದು, ಪ್ರತಿಕ್ರಿಯೆ ನಿರೀಕ್ಷಿಸಲಾಗಿದೆ.<br>ಮುಂದುವರೆದು, ದಿನಾಂಕ:06.02.2024ರಂದು ತುಂಗಭದ್ರಾ ಮಂಡಳಿಗೆ ಸಲ್ಲಿಸಿರುವ ಸದರಿ ಯೋಜನೆಯ ವಿವರವಾದ ಯೋಜನಾ ವರದಿಯ ಕುರಿತು ದಿನಾಂಕ:22.11.2024ರಂದು ನಡೆದ ತುಂಗಭದ್ರಾ ಮಂಡಳಿಯ ಸಭೆಯಲ್ಲಿ ಚರ್ಚೆಯಾಗಿದ್ದು, ತೆಲಂಗಾಣ ಮತ್ತು ಆಂಧ್ರಪ್ರದೇಶ ರಾಜ್ಯಗಳ ಪ್ರತಿಕ್ರಿಯೆಗಳನ್ನು ಪಡೆದು, ಪರಿಶೀಲಿಸಿ, ಮುಂದಿನ ಸಭೆಗಳಲ್ಲಿ ಈ ವಿಷಯವನ್ನು ಚರ್ಚಿಸಲು ತೀರ್ಮಾನಿಸಲಾಗಿದೆ. |
| ಆ) | ತುಂಗಭದ್ರಾ ಜಲಾಶಯ ಸಾಮರ್ಥ್ಯ ಹೆಚ್ಚಿಸಲು ನವಲಿ ಬಳಿ ಸಮಾನಂತರ ಜಲಾಶಯ ನಿರ್ಮಿಸಲು ವಿಸ್ತೃತ ಯೋಜನಾ ವರದಿಯನ್ನು ರಾಜ್ಯ ಸರ್ಕಾರ ತಯಾರಿಸಿದೆಯೇ; ಹಾಗಿದ್ದಲ್ಲಿ, ಈ ಯೋಜನೆಯ ರೂಪ ರೇಷಗಳು ಯಾವುವು ಮತ್ತು ಈ ಯೋಜನೆಯ ಅನುಷ್ಠಾನ ಯಾವ ಹಂತದಲ್ಲಿ; | |
| ಇ) | ಈ ಸಮಾನಂತರ ಜಲಾಶಯದ ನಿರ್ಮಾಣದಲ್ಲಿ ಆಂಧ್ರ-ತೆಲಂಗಾಣ ಹಾಗೂ ಕೇಂದ್ರ ಸರ್ಕಾರದಿಂದ ಅಗತ್ಯವಿರುವ ಸಹಮತಿ ಹಾಗೂ ಮಂಜೂರಾತಿಗಳನ್ನು ಪಡೆಯಲಾಗಿದೆಯೇ; (ಪೂರ್ಣ ಮಾಹಿತಿ ಅಗತ್ಯವಿರುವ ಸಹಮತಿ ಹಾಗೂ ಮಂಜೂರಾತಿಗಳನ್ನು ಪಡೆಯಲಾಗಿದೆಯೇ; (ಪೂರ್ಣ ಮಾಹಿತಿ ನೀಡುವುದು) | |

ಸಂಖ್ಯೆ: ಜಸಂಇ 158 ಎಂಎಲ್ಎ 2024

(ಡಿ.ಕೆ.ಶಿವಕುಮಾರ್)
ಉಪ ಮುಖ್ಯಮಂತ್ರಿ